# ಸಹಾಯಕ ಆಯುಕ್ತರವರ ನ್ಯಾಯಾಲಯ, ಹೊಸಪೇಟೆ

ಎ.ವಿಲೇ.ನಂ.ಕಂ.ಪಹಣಿ.ಅಪೀಲು:96/2014-15 ದಿನಾಂಕ:07.04.2016.

**ಉಪಸ್ಥಿತರು: ಅವಿನಾಶ್ ಮೆನನ್ ರಾಜೇಂದ್ರನ್, ಭಾ.ಆ.ಸೇ**

**ಸಹಾಯಕ ಆಯುಕ್ತರು, ಹೊಸಪೇಟೆ**

******

**ವಾದಿಗಳು: ಶ್ರೀ/ ಶ್ರೀಮತಿ**

1. ಎಸ್.ಎಮ್.ಹುಸೇನ್‌ಪೀರಾಸಾಬ್ ತಂದೆ ಹಿಸೂರು ಮೋದಿನ್‌ಸಾಬ್,
   **ವಾಸ:** ಸರ್ದಾರ್ ಮೊಹಲ್ಲಾ ಏರಿಯಾ, ಡ್ಯಾಮ್ ರೋಡ್, ಹೊಸಪೇಟೆ, ಬಳ್ಳಾರಿ ಜಿಲ್ಲೆ.

**ಪ್ರತಿವಾದಿಗಳು: ಶ್ರೀ/ ಶ್ರೀಮತಿ**

1. ಚಿಗಿರಿ ದುರುಗಮ್ಮ ತಾಯಿ ಹುಚ್ಚವ್ವ,
   **ವಾಸ:** ರಾಮನಗರ, ಹಗರಿಬೊಮ್ಮನಹಳ್ಳಿ ತಾಲೂಕು, ಬಳ್ಳಾರಿ ಜಿಲ್ಲೆ.
2. ತಹಶೀಲ್ದಾರರು, ಹಗರಿಬೊಮ್ಮನಹಳ್ಳಿ.

**[ಶ್ರೀ ಅಶೋಕ ಕನಕೇರಿ, ವಕೀಲರು, ಹಗರಿಬೊಮ್ಮನಹಳ್ಳಿ ]**

********

**ವ್ಯಾಜ್ಯದ ಜಮೀನು:**

| ತಾಲೂಕು | ಹೋಬಳಿ | ಗ್ರಾಮ | ಸ.ನಂ. | ವಿಸ್ತೀರ್ಣ |
|---|---|---|---|---|
| ಹಗರಿಬೊಮ್ಮನಹಳ್ಳಿ | ಹಗರಿಬೊಮ್ಮನಹಳ್ಳಿ | ಚಿಂತ್ರಪಳ್ಳಿ | 470/ಎ/10 | 05 ಎಕರೆ 08 ಸೆಂಟ್ಸ್ ಪೈಕಿ 02 ಎಕರೆ 58 ಸೆಂಟ್ಸ್ |

**ಪೀಠಿಕೆ:**

ಹಗರಿಬೊಮ್ಮನಹಳ್ಳಿ ತಾಲೂಕು ಹಗರಿಬೊಮ್ಮನಹಳ್ಳಿ ಹೋಬಳಿ ಚಿಂತ್ರಪಳ್ಳಿ ಗ್ರಾಮದ ಸ.ನಂ.470/ಎ/10 ವಿಸ್ತೀರ್ಣ:05 ಎಕರೆ 08 ಸೆಂಟ್ಸ್; ಪೈಕಿ ವಿಸ್ತೀರ್ಣ:02 ಎಕರೆ 58 ಸೆಂಟ್ಸ್; ವಿವಾದಾಸ್ಪದ ಜಮೀನಿಗೆ ಸಂಬಂಧಿಸಿದಂತೆ ತಹಶೀಲ್ದಾರರು, ಹಗರಿಬೊಮ್ಮನಹಳ್ಳಿ ಇವರ ನ್ಯಾಯಾಲಯದ ಆದೇಶ ಸಂಖ್ಯೆ: ನಂ/ಕಂ.ಪಹಣಿ/ವಿವಾದ/90/2011-12 ದಿನಾಂಕ:26.12.2012 ವನ್ನು ಪ್ರಶ್ನಿಸಿ ಕರ್ನಾಟಕ ಭೂ ಕಂದಾಯ ಕಾಯ್ದೆ 1964 ರ ಕಲಂ 136[2] ರಡಿಯಲ್ಲಿ ಮೇಲ್ಮನವಿಯನ್ನು ವಾದಿಪರ ವಕೀಲರು ದಿನಾಂಕ:07.08.2014 ರಂದು ಸಲ್ಲಿಸಿರುತ್ತಾರೆ.

ವಾದಿಗಳ ಪರ ವಕೀಲರು ಸಲ್ಲಿಸಿದ ದಾಖಲೆಗಳನ್ನು ಪರಿಶೀಲಿಸಿ, ನೈಸರ್ಗಿಕ ನ್ಯಾಯದ ಹಿತದೃಷ್ಟಿಯಿಂದ ಪ್ರಕರಣದ ವಿಚಾರಣೆಯನ್ನು ದಿನಾಂಕ:02.09.2014 ಕ್ಕೆ ನಿಗಧಿಪಡಿಸಿ ಉಭಯಪಕ್ಷಗಳಿಗೆ ನೋಟೀಸು ಮೂಲಕ ತಿಳಿಸಿ ವಿಚಾರಣೆಯನ್ನು ಪ್ರಾರಂಭಿಸಲಾಯಿತು.

ಆದರೆ ವಿಚಾರಣೆ ಪ್ರಾರಂಭಿಸಿದಾಗಿನಿಂದ ಉಭಯ ಪಕ್ಷಗಾರರು ಸತತವಾಗಿ ಗೈರುಹಾಜರಾಗಿದ್ದು, ಪ್ರಕರಣದಲ್ಲಿ ಆಸಕ್ತಿ ಇಲ್ಲದೇ ಇರುವುದು ಕಂಡುಬಂದಿರುತ್ತದೆ. ಆದುದರಿಂದ, ಪ್ರಕರಣವನ್ನು ಇದೇ ಹಂತದಲ್ಲಿ ಮುಕ್ತಾಯಗೊಳಿಸಲು ಈ ಕೆಳಕಂಡಂತೆ

**-:ಆದೇಶ:-**

ಪೀಠಿಕೆಯಲ್ಲಿ ವಿವರಿಸಿದ ಸಂದರ್ಭ, ವಾಸ್ತವಾಂಶ, ಹಿನ್ನಲೆ ಮತ್ತು ಕಾರಣಗಳ ಆಧಾರದ ಮೇಲೆ ಉಭಯ ಪಕ್ಷಗಾರರು ಸತತವಾಗಿ ಗೈರುಹಾಜರಾಗಿರುವುದರಿಂದ, ಸದರಿ ಅಪೀಲನ್ನು ಇದೇ ಹಂತದಲ್ಲಿ ಮುಕ್ತಾಯಗೊಳಿಸಲಾಗಿದೆ. (dismissed for default).

ಈ ಆದೇಶವನ್ನು ಹೇಳಿ ಬರೆಯಿಸಿ, ಗಣಕೀಕರಣ ಮಾಡಿಸಿ, ತಪ್ಪುಗಳನ್ನು ಸರಿಪಡಿಸಿ, ಈ ದಿನ ದಿನಾಂಕ:07.04.2016 ರಂದು ತೆರೆದ ನ್ಯಾಯಾಲಯದಲ್ಲಿ ಘೋಷಿಸಿದೆ.

ರವಾನಿಸಲಾಗಿದೆ : 20/4/16
ಕ್ರಮಾಂಕ :
ದಿನಾಂಕ :

[ಅವಿನಾಶ್ ಮೆನನ್ ರಾಜೇಂದ್ರನ್, ಭಾ.ಆ.ಸೇ]
ಸಹಾಯಕ ಆಯುಕ್ತರು,
ಹೊಸಪೇಟೆ.

ವಾದಿ : ಪ್ರತಿವಾದಿಗಳಿಗೆ

**ಪ್ರತಿಯನ್ನು:** ತಹಶೀಲ್ದಾರರು, ಹಗರಿಬೊಮ್ಮನಹಳ್ಳಿ ಇವರಿಗೆ ಸಂಬಂಧಿಸಿದ ಮೂಲ ಕಡತದೊಂದಿಗೆ ಸೂಕ್ತ ಕ್ರಮಕ್ಕಾಗಿ ರವಾನಿಸಿದೆ.